<table>
<tr><td colspan="3">ಕರ್ನಾಟಕ ಸರ್ಕಾರ (ಸಿ.ಆರ್.ಪಿ-67)</td></tr>
<tr><td rowspan="4">ಹೇಳಿಕೆ ಹಾಳೆ (ಆರ್.ಸಿ. ಸಂಖ್ಯೆ 57) ನಮೂನೆ ಸಂಖ್ಯೆ 4</td><td colspan="2">ಪ್ರಧಾನ ದಿವಾಣಿ ಹಾಗೂ ಪ್ರ.ದ.ನ್ಯಾ.ದಂ.ಗಳ ನ್ಯಾಯಾಲಯ, ಚನ್ನಪಟ್ಟಣ</td></tr>
<tr><td colspan="2">ಸಿ.ಸಿ ನಂ. 1211/2023</td></tr>
<tr><td>ಸಿ.ಡಬ್ಲೂ</td><td>14</td></tr>
<tr><td>ಪಿ.ಡಬ್ಲೂ</td><td>8</td></tr>
<tr><td>ಸಾಕ್ಷಿದಾರರ ಹೆಸರು</td><td colspan="2">ರಾಜೇಶ್. ಹೆಚ್.ಆರ್. ಬಿನ್ ರಾಜು</td></tr>
<tr><td>ವಯಸ್ಸು</td><td colspan="2">33 ವರ್ಷ</td></tr>
<tr><td>ಉದ್ಯೋಗ</td><td colspan="2">ವ್ಯವಸಾಯ</td></tr>
<tr><td>ವಾಸಸ್ಥಳ</td><td colspan="2">ಚನ್ನಪಟ್ಟಣ</td></tr>
</table>

**ದಿನಾಂಕಃ- 24.03.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಖ್ಯ ವಿಚಾರಣೆಃ- ಸಹಾಯಕ ಸರ್ಕಾರಿ ಅಭಿಯೋಜಕರಿಂದ**

1) ಸಾಕ್ಷಿಯು ನಿಪಿ.2 ಸ್ಥಳ ಪಂಚನಾಮೆ ಮತ್ತು ನಿಪಿ.3 ಅಮಾನತ್ತು ಪಂಚನಾಮೆಗಳ ಮೇಲೆ ಇರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಗಳನ್ನು ಕ್ರಮವಾಗಿ ನಿಪಿ.2(ಸಿ) ಮತ್ತು ನಿಪಿ.3(ಸಿ) ಎಂದು ಗುರುತಿಸಲಾಯಿತು. ನಿಪಿ.2 ಮತ್ತು 3 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನಿಪಿ.2 ಮತ್ತು 3 ಕ್ಕೆ ಪೊಲೀಸರ ಕೋರಿಕೆಯ ಮೇರೆಗೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ.

**ಈ ಹಂತದಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಅನುಮತಿ ಕೋರಿದ್ದು, ಕೋರಿಕೆಯ ಮೇರೆಗೆ ಅನುಮತಿ ನೀಡಲಾಗಿದೆ.**

**ಪಾಟೀ ಸವಾಲುಃ- ಸಹಾಯಕ ಸರ್ಕಾರಿ ಅಭಿಯೋಜಕರಿಂದ**

1) ದಿಃ- 19.11.2022 ರಂದು ಮಧ್ಯಾಹ್ನ 03.00 ರಿಂದ 03.45 ರ ಸಮಯದಲ್ಲಿ ಪೊಲಿಸರು ಚನ್ನಪಟ್ಟಣ ತಾಲ್ಲೂಕು, ಮೈಸೂರು ಕಡೆಯಿಂದ ಬೆಂಗಳೂರು ಕಡೆಗೆ ಹೋಗುವ ಹೆದ್ದಾರಿಯ ಬಳಿ ತಿಟ್ಟಮಾರನಹಳ್ಳಿ ಗ್ರಾಮದ ರೈಲ್ವೇ ಬ್ರಿಡ್ಜ ಮುಂಭಾಗಕ್ಕೆ ಬಂದು ಅಲ್ಲಿ ಚಾಸಾ-1 ರವರು ತೋರಿಸಿದ ಜಾಗದಲ್ಲಿ ನನ್ನ ಸಮಕ್ಷಮ ನಿಪಿ.2 ರಂತೆ ಪಂಚನಾಮೆಯನ್ನು ಸ್ಥಳದಲ್ಲಿ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಅದೇ ದಿನ ಸಂಜೆ 04.00 ರಿಂದ 04.45 ರ ಸಮಯದಲ್ಲಿ ಸಂಚಾರಿ ಪೊಲೀಸ್ ಠಾಣೆಯ ಹಿಂಭಾಗದ ಆವರಣದಲ್ಲಿ ಅಪಘಾತಕ್ಕೊಳಪಟ್ಟ ಎರಡು ವಾಹನಗಳನ್ನು ಜಪ್ತುಪಡಿಸಿ ನಿಪಿ.3 ರಂತೆ ಪಂಚನಾಮೆಯನ್ನು ಮಾಡಿ ಅಲ್ಲಿಯೇ

ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತನು ನನಗೆ ಪರಿಚಯ ಇದ್ದ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

**ಪಾಟೀ ಸವಾಲುಃ- ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕರಣ ಮಾಡಲಾಯಿತು.)

**ಓ.ಹೇ.ಕೆ.ಸರಿ ಇದೆ.**

**ಪ್ರಧಾನ ದಿವಾಣಿ ಹಾಗೂ ಪ್ರ.ದ.ನ್ಯಾ.ದಂ.ಗಳು**
**ಚನ್ನಪಟ್ಟಣ**